# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಯೋಜನೆಗಳಿಗೆ 2018-19ನೇ ಸಾಲಿನಲ್ಲಿ ಒದಗಿಸಿರುವ ಆಯವ್ಯಯದಲ್ಲಿ ಮೊದಲನೇ ತ್ರೈಮಾಸಿಕ ಕಂತಿನ ಅನುದಾನ ಬಿಡುಗಡೆ ಮಾಡುವ ಬಗ್ಗೆ.

**ಓದಲಾಗಿದೆ:**
1) ಸರ್ಕಾರಿ ಆದೇಶ ಸಂಖ್ಯೆ: ಎಂಡಬ್ಲ್ಯೂಡಿ 257 ಎಂಡಿಎಸ್ 2018, ದಿನಾಂಕ:06.04.2018.
2) ನಿರ್ದೇಶಕರು, ಖಜಾನೆ ಇಲಾಖೆ ಇವರ ಇ-ಮೇಲ್ ದಿನಾಂಕ:03.04.2018
3) ನಿರ್ದೇಶಕರು, ಅಲ್ಪಸಂಖ್ಯಾತರ ನಿರ್ದೇಶನಾಲಯ ಇವರ ಪತ್ರ ಸಂಖ್ಯೆ: ಅಸಂನಿ/ಆ.ವ್ಯ/ಬಿಡುಗಡೆ/ಸಿಆರ್-10/2018-19, ದಿನಾಂಕ:06.04.2018
4) ಕಾರ್ಯದರ್ಶಿಗಳು, ಕರ್ನಾಟಕ ರಾಜ್ಯ ಅಲ್ಪಸಂಖ್ಯಾತರ ಆಯೋಗ ಇವರ ಪತ್ರ ಸಂಖ್ಯೆ:ಕರಾಅಅ/ಆಡಳಿತ/11/2018-18, ದಿನಾಂಕ:10.04.2018
5) ಮುಖ್ಯಕಾರ್ಯನಿರ್ವಹಣಾಧಿಕಾರಿ, ಕರ್ನಾಟಕ ರಾಜ್ಯ ವಕ್ಫ್ ಮಂಡಳಿ ಇವರ ಪತ್ರ ಸಂಖ್ಯೆ: ಕರಾವಮಂ/ಬಿಲ್ಸ್/01/2018-19, ದಿನಾಂಕ:10.04.2018
6) ನಿಬಂಧಕರು, ಕರ್ನಾಟಕ ಉರ್ದು ಅಕಾಡೆಮಿ ಇವರ ಪತ್ರ ದಿನಾಂಕ:10.04.2018
7) ವ್ಯವಸ್ಥಾಪಕ ನಿರ್ದೇಶಕರು, ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ ಇವರ ಪತ್ರ ದಿನಾಂಕ:10.04.2018
8) ಕಾರ್ಯನಿರ್ವಹಣಾಧಿಕಾರಿ, ಕರ್ನಾಟಕ ರಾಜ್ಯ ಹಜ್ ಸಮಿತಿ ಇವರ ಪತ್ರ ದಿನಾಂಕ:10.04.2018

**ಪ್ರಸ್ತಾವನೆ:**

ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಇಲಾಖೆಯಲ್ಲಿ 2017-18ನೇ ಸಾಲಿನಲ್ಲಿ ಚಾಲ್ತಿಯಲ್ಲಿದ್ದ ಯೋಜನಾ ಕಾರ್ಯಕ್ರಮಗಳನ್ನು 2018-19ನೇ ಸಾಲಿನವರೆಗೆ ಮುಂದುವರೆಸಿ ಮೇಲೆ ಓದಲಾದ ಕ್ರಮ ಸಂಖ್ಯೆ: (1) ರಲ್ಲಿ ಸರ್ಕಾರದ ಆದೇಶ ಹೊರಡಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2)ರಲ್ಲಿ ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಇಲಾಖೆಗೆ 2018-19ನೇ ಸಾಲಿನ ಆಯವ್ಯದಲ್ಲಿ ನಿಗಧಿಪಡಿಸಲಾದ ಅನುದಾನದಲ್ಲಿ ಶೇ.33.33%ರಷ್ಟು ಅನುದಾನವನ್ನು ಆರ್ಥಿಕ ಇಲಾಖೆಯು ಖಜಾನೆ-2ರ ಮೂಲಕ ಬಿಡುಗಡೆ ಮಾಡಿದೆ.

2018-19ನೇ ಆರ್ಥಿಕ ವರ್ಷದಲ್ಲಿ ಒದಗಿಸಲಾಗಿರುವ ಆಯವ್ಯಯದಲ್ಲಿ ಆರ್ಥಿಕ ಇಲಾಖೆಯು ಖಜಾನೆ-2 ನಲ್ಲಿ ಬಿಡುಗಡೆ ಮಾಡಿರುವಂತೆ ಮೊದಲನೇ ತ್ರೈಮಾಸಿಕ ಕಂತಿನ ಶೇ. 33.33%ರಷ್ಟು ಅನುದಾನವನ್ನು ಬಿಡುಗಡೆ ಮಾಡುವಂತೆ ಕೋರಿ ನಿರ್ದೇಶಕರು, ಅಲ್ಪಸಂಖ್ಯಾತರ ಕಲ್ಯಾಣ ನಿರ್ದೇಶನಾಲಯ; ಕಾರ್ಯದರ್ಶಿ, ಕರ್ನಾಟಕ ರಾಜ್ಯ ಅಲ್ಪಸಂಖ್ಯಾತರ ಆಯೋಗ; ಮುಖ್ಯಕಾರ್ಯನಿರ್ವಹಣಾಧಿಕಾರಿ, ಕರ್ನಾಟಕ ರಾಜ್ಯ ವಕ್ಫ್ ಮಂಡಳಿ; ನಿಬಂಧಕರು, ಕರ್ನಾಟಕ ಉರ್ದು ಅಕಾಡೆಮಿ; ಕಾರ್ಯನಿರ್ವಹಣಾಧಿಕಾರಿಗಳು, ಕರ್ನಾಟಕ ರಾಜ್ಯ ಹಜ್ ಸಮಿತಿ ಮತ್ತು ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ ಮತ್ತು ಇವರು ಮೇಲೆ ಓದಲಾದ ಕ್ರಮ ಸಂಖ್ಯೆ: (3) ರಿಂದ (8)ರಲ್ಲಿ ಸರ್ಕಾರಕ್ಕೆ ಪ್ರಸ್ತಾವನೆಗಳನ್ನು ಸಲ್ಲಿಸಿರುತ್ತಾರೆ.

..2.